# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 05(ಜಕ್ಕೂರು)
## ವಾರ್ಡ್‌ಸಮಿತಿ ಸಭೆ, ದಿನಾಂಕ: 03.07.2021 ರ
## ಸಭಾ ನಡುವಳಿ

ದಿನಾಂಕ: 03.07.2021 ರಂದು ಬೆಳ್ಳಿಗೆ 11.30 ಗಂಟೆಗೆ ವಾರ್ಡ್ ನಂ.05 ಜಕ್ಕೂರು ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಯಕ ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ಉಪ ವಿಭಾಗ ಕಛೇರಿ, ದಾಸರಹಳ್ಳಿ, ಇಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಜಿ ದೇವರಾಜ್ | ನೋಡಲ್ ಅಧಿಕಾರಿ, ವಾರ್ಡ್ ನಂ. 05(ಜಕ್ಕೂರು) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನಾ ವಿಭಾಗ) |
| 2 | ವೈ.ಎನ್ ಮಹಂತೇಶ್ ಕುಮಾರ್ | ಕಾರ್ಯದರ್ಶಿಗಳು, ವಾರ್ಡ್ ಕಮಿಟಿ ವಾರ್ಡ್ ನಂ. 06 , ಮತ್ತು ಸಹಾಯಕ ಅಭಿಯಂತರರು |
| 3 | ಮಹದೇವಪ್ಪ | ರೆವಿನ್ಯೂ ಇನ್ಸ್‌ಪೆಕ್ಟರ್ ವಾರ್ಡ್ ನಂ. 05 |
| 4 | ಸೋಮಶೇಖರ್ | ವ್ಯವಸ್ಥಾಪಕರು, ಸ.ಕಂ.ಅ ಬ್ಯಾ.ಉ.ವಿ |
| 5 | ಶ್ರೀ ಜಿ. ವೆಂಕಟೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 05 |
| 6 | ಶ್ರೀ ಅಶ್ವಥ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 05 |
| 7 | ಬಿ. ನಾಗೇಂದ್ರಪ್ಪ | ಎಸ್.ಡಿ.ಎ. ಕಂದಾಯ ಶಾಖೆ, ಥಣಿಸಂದ್ರ |

ಶ್ರೀ ವೈ.ಎನ್ ಮಹಂತೇಶ್ ಕುಮಾರ್ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳು, ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಈ ಸಭೆಯಲ್ಲಿ ಚರ್ಚಿಸಬೇಕಾದ ಪ್ರಮುಖ ವಿಷಯಗಳ ಬಗ್ಗೆ ವಿವರಿಸುತ್ತಾ ಸದರಿ ಸಭೆಯ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. **ಕೋವಿಡ್-19ರ ಸಂಬಂಧ ಮುಜಾಗೃತ ಕ್ರಮಗಳ ಬಗ್ಗೆ.** ವಾರ್ಡ್ ಸ.ಅ ರವರು ಮಾತನಾಡಿ ಬೆಂಗಳೂರು ನಗರದಲ್ಲಿ ದಿನೇ ದಿನೇ ಸೋಂಕು ಕಡಿಮೆಯಾಗುತ್ತಿದ್ದು, ಘನ ಸರ್ಕಾರದ ವತಿಯಿಂದ ಉಚಿತವಾಗಿ ಲಸಿಕೆ ನೀಡಲಾಗುತ್ತಿದ್ದು, ಲಸಿಕೆ ಹಾಕಿಸಿಕೊಳ್ಳುವಂತೆ ಅರಿವು ಮೂಡಿಸಲು ಕ್ರಮವಹಿಸಬೇಕಾಗಿರುತ್ತದೆ. ಹಾಗೂ 3ನೇ ಅಲೆ ಸಂಭವಿಸುವ ಸೂಚನೆಗಳಿರುವುದರಿಂದ ಸಾರ್ವಜನಿಕರಿಗೆ ಸ್ವಚ್ಛತೆಯ ಬಗ್ಗೆ ಹೆಚ್ಚಿನ ಗಮನ ಹರಿಸುವಂಥೆ ಕ್ರಮ ವಹಿಸಲು ಮಾನ್ಯ ಅಧ್ಯಕ್ಷರು ಸೂಚಿಸಿದರು.
2. ಒಣ ಕಸ ವಿಲೇವಾರಿಗಾಗಿ ಹೆಚ್ಚುವರಿ ಆಟೋ ಟಿಪ್ಪರ್‌ಗಳನ್ನು ಒದಗಿಸಲು ಆರೋಗ್ಯ ಪರಿವೀಕ್ಷಕರು ಮನವಿ ಮಾಡಿದರು ಈ ಬಗ್ಗೆ ಅಧ್ಯಕ್ಷರು ಸಂಬಂಧಪಟ್ಟ ಘನತ್ಯಾಜ್ಯ ಸ.ಕಾ.ಅ ರವರಿಗೆ ಮಾತನಾಡಿ ಕೂಡಲೇ ಕ್ರಮ ವಹಿಸುವಂತೆ ಸೂಚಿಸಿದರು.
3. ಸಾರ್ವಜನಿಕರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಚರಂಡಿಗಳಲ್ಲಿ ತುಂಬಿರುವ ಹೂಳು ಮತ್ತು ಡೆಬ್ರಿಸ್ ಅನ್ನು ತೆಗೆದು ಹೊರಸಾಗಿಸುವಂತೆ ಕೋರಿದರು.
4. ಸ.ಅ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ತಾತ್ಕಾಲಿಕ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಲಾಗಿದ್ದು, ಮಳೆ, ತುರ್ತು ಸಂಬಂಧ ಪರಿಸ್ಥಿತಿಯನ್ನು ತಿಳಿಗೊಳಿಸಲು ಮುನ್ನೆಚ್ಚರಿಕೆ ಕ್ರಮವಾಗಿ ನಿಯಂತ್ರಣ



Scanned with CamScanner

ಕೊಠಡಿಯನ್ನು ಸ್ಥಾಪಿಸಲಾಗಿರುತ್ತದೆಂದು ಹಾಗೂ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ವಿಲೇವಾರಿ ಮಾಡಲು ಮಾನ್ಯ ವಿಶೇಷ ಆಯುಕ್ತರು, ಹಣಕಾಸು ರವರ ಸೂಚನೆಯಂತೆ ಅಂದಾಜು ಪಟ್ಟಿಯನ್ನು ಅನುಮೋದನೆಗೆ ಸಲ್ಲಿಸಲಾಗಿರುತ್ತದೆ. ಸದರಿ ಅಂದಾಜು ಅನುಮೋದನೆಗೊಂಡ ನಂತರ ಕ್ರಮ ವಹಿಸಲಾಗುವುದು ಎಂದು ಸಭೆಗೆ ತಿಳಿಸಿದರು.

5. ಶ್ರೀ ವೆಂಕಟೇಶ್ ಹಿ.ಅ.ಪ ರವರು ಮಾತನಾಡಿ ವಾರ್ಡ್ ವ್ಯಾಪ್ತಿಯ ಬ್ಲಾಕ್‌ಸ್ಪಾಟ್‌ಗಳಲ್ಲಿ ಸಾರ್ವಜನಿಕರ ಕಸ ಎಸೆಯುವುದನ್ನು ತಡೆಯಲು ಮುಂಜಾಗೃತ ಕ್ರಮಗಳನ್ನು ತೆಗೆದುಕೊಳ್ಳಲು ತಿಳಿಸಲಾಯಿತು.
6. ಬೀದಿ ದೀಪ ನಿರ್ವಹಣೆಗೆ ಸಂಬಂಧಿಸಿದಂಥೆ ಸಂಬಂಧಪಟ್ಟ ಅಭಿಯಂತರಿಗೆ ಸ್ಥಳದಲ್ಲಿ ಕರೆ ಮಾಡಿ ವಾರ್ಡ್ ವ್ಯಾಪ್ತಿಯಲ್ಲಿ ರಿಪೇರಿಯಾಗಿರುವ ಬೀದಿ ದೀಪಗಳನ್ನು ರಿಪೇರಿ ಮಾಡಿಸಿ ಮುಂದಿನ ಸಭೆಗೆ ವರಧಿ ನೀಡಲು ಸೂಚಿಸಿದರು.
7. ಅಸಂಘಟಿತ ಕಾರ್ಮಿಕರಿಗೆ ಘನ ಸರ್ಕಾರದಿಂದ ಸಹಾಯ ಧನ ಬಿಡುಗಡೆಯಾಗುದ್ದು, ಸಂಬಂಧಪಟ್ಟ ಅಧಿಕಾರಿಗಳಿಗೆ ಅರ್ಜಿ ಸಲ್ಲಿಸಿ ಸಹಾಯಧನದ ಉಪಯೋಗ ಪಡೆದುಕೊಳ್ಳಲು ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪ್ರಚಾರ ಮಾಡಲು ತಿಳಿಸಲಾಯಿತು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸುವಂಥೆ ಸೂಚಿಸಿದರು ಹಾಗೂ ಕೋವಿಡ್–19ರ ಸಂಬಂಧ ಮೇಲಾಧಿಕಾರಿಗಳಿಂದ ಬರುವ ಸೂಚನೆ ಮತ್ತು ಆದೇಶಗಳನ್ನು ನಿಯಮಾಸುಸಾರ ಪಾಲಿಸುವಂಥೆ ಹಾಗೂ ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸೂಚಿಸುತ್ತಾ ಮುಂದಿನ ಸಭೆಗೆ ಸಂಬಧಪಟ್ಟ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವಂಥೆ ಕ್ರಮ ವಹಿಸಲು ಕಾರ್ಯದರ್ಶಿಯವರಿಗೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 05(ಜಕ್ಕೂರು)

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 05, (ಜಕ್ಕೂರು)
3/7/2021

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.



Scanned with CamScanner